# Akashvani : Bangalore
# Regional Bulletin In Kannada
# 17.04.2026 / 18.40  hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**17.04.2026 / 18.40   hrs**

**<><*<><>*><>**

## ಮುಖ್ಯಾಂಶಗಳು

೧. ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸೈಬರ್ ಲ್ಯಾಬ್ ಸ್ಥಾಪನೆ ಮೂಲಕ ಅಪರಾಧ ನಿಯಂತ್ರಣಕ್ಕೆ ಕ್ರಮ - ಗೃಹ ಸಚಿವ ಡಾ.ಜಿ.ಪರಮೇಶ್ವರ್

೨. ಭ್ರಷ್ಟಾಚಾರ ನಿರ್ಮೂಲನೆ, ಆಡಳಿತ ಸುಧಾರಣೆಯಲ್ಲಿ ಮಹತ್ವರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ'ಕ್ಕೆ ೪೦ ವರ್ಷ : ನಾಳೆ ಬೆಂಗಳೂರಿನಲ್ಲಿ ಕಾರ್ಯಕ್ರಮ; ನ್ಯಾಯಮೂರ್ತಿ ಸೂರ್ಯ ಕಾಂತ್ ಉದ್ಘಾಟನೆ

೩. ಮಹಿಳಾ ಮೀಸಲಾತಿ ವಿಧೇಯಕ ; ಕೇಂದ್ರ ಸರ್ಕಾರದಿಂದ ಐತಿಹಾಸಿಕ ಹೆಜ್ಜೆ ; ಲೋಕಸಭೆಯಲ್ಲಿ ಸಚಿವ ಹೆಚ್.ಡಿ.ಕುಮಾರಸ್ವಾಮಿ

೪. ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಉಂಟಾಗದಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಸಚಿವ ಶರಣಪ್ರಕಾಶ್ ಪಾಟೀಲ್ ಸೂಚನೆ

೫. ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದಿಂದ ಶಾಸಕ ವಿನಯ್ ಕುಲಕರ್ಣಿ ಹಾಗೂ ಇತರ ೧೬ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ಪ್ರಕಟ

**<><*<><>*><>**

ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಸೈಬರ್ ಲ್ಯಾಬ್ ಸ್ಥಾಪಿಸಿ ಪ್ರತಿ ಪೊಲೀಸ್ ಸಿಬ್ಬಂದಿಗೆ ಸೂಕ್ತ ತರಬೇತಿ ನೀಡುವ ಮೂಲಕ ಅಪರಾಧ ನಿಯಂತ್ರಣಕ್ಕೆ ಕ್ರಮ ವಹಿಸಲಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಅವರು, ಬೆಳಗಾವಿಯಲ್ಲಿಂದು ಪೊಲೀಸ್ ಕಟ್ಟಡಗಳ ಶಂಕು ಸ್ಥಾಪನೆ ನೆರವೇರಿಸಿದ ಬಳಿಕ ಮಾತನಾಡಿ, ಮಾದಕದ್ರವ್ಯ ಮಾರಾಟದ ಜಾಲವನ್ನು ಮಟ್ಟ ಹಾಕಲು ಸರ್ಕಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಂಡಿದೆ ಎಂದರು. ಬೆಳಗಾವಿ ಜಿಲ್ಲೆಯಲ್ಲಿ ೬೭ ಕೋಟಿ ೭೯ ಲಕ್ಷ ರೂಪಾಯಿ ವೆಚ್ಚದಲ್ಲಿ ಪೊಲೀಸ್ ಸಿಬ್ಬಂದಿಗಳ ವಸತಿ ಗೃಹ ನಿರ್ಮಾಣ ಮಾಡಲಾಗುತ್ತಿದೆ. ಈ ವರ್ಷ ಒಟ್ಟಾರೆ ೧ ಸಾವಿರದ ೨೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತ ವಸತಿ ಗೃಹಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಅವರು ತಿಳಿಸಿದರು.

ಧ್ವನಿ : ಜಿ.ಪರಮೇಶ್ವರ್( ೨೩ ಸೆಕೆಂಡ್ಸ್)

**<><*<><>*><>**

ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿರುವ ಹಿನ್ನೆಲೆಯಲ್ಲಿ ನಾಳೆ ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ವರಿಷ್ಠ ನ್ಯಾಯಾಧೀಶ ನ್ಯಾಯಮೂರ್ತಿ ಸೂರ್ಯ ಕಾಂತ್ ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ. ಈ ಸಂದರ್ಭದಲ್ಲಿ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು. ಸಭಾ ಕಾರ್ಯಕ್ರಮದ ನಂತರ ವಿಶೇಷ ವಿಚಾರಗೋಷ್ಠಿಗಳು ನಡೆಯಲಿವೆ.

<><*<><>*><>

ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಐತಿಹಾಸಿಕ ಹೆಜ್ಜೆ ಇರಿಸಿದೆ ಎಂದು ಸಚಿವ ಹೆಚ್.ಡಿ. ಕುಮಾರಸ್ವಾಮಿ ಲೋಕಸಭೆಯಲ್ಲಿಂದು ಹೇಳಿದ್ದಾರೆ ಮಹಿಳಾ ಮೀಸಲು ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಅವರು, ಈ ವಿಧೇಯಕ ಭಾರತದ ಪ್ರಜಾಪ್ರಭುತ್ವದ ಪಯಣದಲ್ಲಿ ಕ್ರಾಂತಿಕಾರಕ ಹೆಜ್ಜೆಯಾಗಿದೆ. ಈ ಕ್ರಮವು ಮಹಿಳೆಯರಿಗೆ ಮಾಡುವ ಉಪಕಾರವಲ್ಲ, ಬದಲಾಗಿ ಸಮಾಜಕ್ಕೆ ಅವರು ನೀಡಿದ ಕೊಡುಗೆಯನ್ನು ಗುರುತಿಸಿ ಮನ್ನಣೆ ನೀಡುವುದೇ ಆಗಿದೆ ಎಂದು ಸಚಿವರು ಹೇಳಿದರು. ಕ್ಷೇತ್ರ ಮರು ವಿಂಗಡಣೆಯ ಬಗ್ಗೆ ಪ್ರತಿಪಕ್ಷಗಳ ಕಳವಳಕ್ಕೆ ಅರ್ಥವಿಲ್ಲ. ಸರ್ಕಾರವು ಎಲ್ಲಾ ರಾಜ್ಯಗಳ ಸ್ಥಾನಗಳಲ್ಲಿ ಸರಾಸರಿ ಶೇಕಡ ೫೦ರಷ್ಟು ಕ್ಷೇತ್ರಗಳನ್ನು ಹೆಚ್ಚಿಸುವ ಏಕರೂಪ ಬದ್ಧತೆಯನ್ನು ಖಚಿತಪಡಿಸಿದೆ. ಯಾವುದೇ ರಾಜ್ಯವು ತನ್ನ ಪ್ರಸ್ತುತ ಪ್ರಾತಿನಿಧ್ಯವನ್ನು ಕಳೆದುಕೊಳ್ಳುವುದಿಲ್ಲ ಎಂದು ತಿಳಿಸಿದರು. ೧೯೯೫ರಲ್ಲಿ ಹೆಚ್.ಡಿ.ದೇವೇಗೌಡರು ಕರ್ನಾಟಕದ ಮುಖ್ಯಮಂತ್ರಿಯಾಗಿದ್ದಾಗ ಮಹಿಳೆಯರಿಗೆ ಶೇಕಡ ೩೩ರಷ್ಟು ಮೀಸಲಾತಿ ನೀಡುವ ಆಶಯವನ್ನು ಪ್ರಪ್ರಥಮ ಬಾರಿಗೆ ಪ್ರಸ್ತಾಪಿಸಿದ್ದರು ಎಂದು ಹೇಳಿದ ಅವರು, ದೇವೇಗೌಡರು ಆ ನಂತರ ೧೯೯೬ರಲ್ಲಿ ಪ್ರಧಾನಿಯಾಗಿ ಸಂಸತ್ತಿನಲ್ಲಿ ಈ ಮಹಿಳಾ ಮೀಸಲು ಮಸೂದೆಯನ್ನು ಮಂಡಿಸಿದರು, ಆದರೆ ರಾಜಕೀಯ ಬೆಂಬಲದ ಕೊರತೆಯಿಂದಾಗಿ ಆ ಸಮಯದಲ್ಲಿ ಅದನ್ನು ಈ ಸದನದಲ್ಲಿ ಅಂಗೀಕರಿಸಲು ಸಾಧ್ಯವಾಗಲಿಲ್ಲ ಎಂದರು.

<><*<><>*><>

ಪಶ್ಚಿಮ ಏಷ್ಯಾ ಸಂಘರ್ಷಕ್ಕೆ ತಾತ್ಕಾಲಿಕ ವಿರಾಮ ಸಿಕ್ಕ ಬೆನ್ನಲ್ಲೇ ಸಂಯುಕ್ತ ಅರಬ್ ರಾಷ್ಟ್ರದಿಂದ ಹೊರಟು ಹೊರ್ಮುಜ್ ಜಲಸಂಧಿ ದಾಟಿದ ಎಂಎಸ್‌ಜಿ ಹೆಸರಿನ ಹಡಗು, ನಿನ್ನೆ ಸಂಜೆ ಕಾರವಾರ ವಾಣಿಜ್ಯ ಬಂದರು ತಲುಪಿದೆ. ಗ್ಯಾಬೊನ್ ದೇಶದ ಧ್ವಜವುಳ್ಳ ಈ ಹಡಗು ೬ ಸಾವಿರ ಟನ್ ಬಿಟುಮಿನ್ ಸರಕು ತಂದಿದೆ. ಈ ನೌಕೆ ಸುಮಾರು ಹತ್ತು ದಿನಗಳ ಹಿಂದೆ ಯುಎಇ ಇಂದ ಪ್ರಯಾಣ ಬೆಳೆಸಿತ್ತು.

ಮಾರ್ಚ್ ೧೩ರಂದು ಯುಎಇಯಿಂದ ಚೆಂಗ್ ಎಕ್ಸ್ ಹೆಸರಿನ ಹಡಗು ೩ ಸಾವಿರದ ೧೦೦ ಟನ್ ಬಿಟುಮಿನ್ ತಂದಿತ್ತು. ಆ ಬಳಿಕ ಒಂದು ತಿಂಗಳಿನಿಂದ ಯಾವುದೇ ಹಡಗು ಬಂದಿರಲಿಲ್ಲ.

<><*<><>*><>

ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ಉಂಟಾಗದಂತೆ ನೋಡಿಕೊಳ್ಳಬೇಕೆಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಬೆಂಗಳೂರಿನ ವಿಕಾಸಸೌಧದಲ್ಲಿ ಇಂದು ನಡೆದ ಇಲಾಖಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಪಾಟೀಲ್, ಲೋಕಾಯುಕ್ತರು ಮಾಡಿದ ಅವಲೋಕನಗಳು ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುವ ಆಸ್ಪತ್ರೆಗಳಲ್ಲಿ ಔಷಧ ಲಭ್ಯತೆಯ ಬಗ್ಗೆ ವ್ಯಾಪಕ ದೂರುಗಳು ಬಂದಿರುವ ಬಗ್ಗೆ ಉಲ್ಲೇಖಿಸಿದರು. ಔಷಧ ಖರೀದಿ ಪ್ರಕ್ರಿಯೆಯನ್ನು ಸಮರ್ಪಕವಾಗಿ ನಡೆಸಲು ಆಸ್ಪತ್ರೆ ಮುಖ್ಯಸ್ಥರಿಗೆ ಜವಾಬ್ದಾರಿ ವಹಿಸಲಾಗಿದೆ. ಔಷಧ ದಾಸ್ತಾನು ಖಾಲಿಯಾಗುವವರೆಗೆ ಕಾಯಬಾರದು. ಎಲ್ಲಾ ಸರ್ಕಾರಿ ಆಸ್ಪತ್ರೆ ಮತ್ತು ಕಾಲೇಜು ಮುಖ್ಯಸ್ಥರು ಕನಿಷ್ಠ ಮೂರು ತಿಂಗಳ ಮುಂಚಿತವಾಗಿ ಖರೀದಿ ಟೆಂಡರ್ ಪ್ರಕ್ರಿಯೆ ಆರಂಭಿಸಬೇಕು ಎಂದು ಸಚಿವರು ಆದೇಶಿಸಿದರು. ಆಸ್ಪತ್ರೆಗಳಲ್ಲಿ ಅಸಮರ್ಪಕ ಐಸಿಯು ನಿರ್ವಹಣೆ ಮತ್ತು ಸ್ವಚ್ಛತೆ ಕಾಪಾಡದಿರುವ ಬಗ್ಗೆ ನಿರಂತರ ದೂರುಗಳು ಬರುತ್ತಿವೆ. ಇದೇ ರೀತಿ ಮುಂದುವರಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

<><*<><>*><>

ಧಾರವಾಡದ ಬಿಜೆಪಿ ನಾಯಕ ಯೋಗೇಶ್ ಗೌಡ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತೀರ್ಪು ಪ್ರಕಟಿಸಿದ್ದು ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಹಾಗೂ ಇತರೆ ೧೬ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿದೆ. ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ಕೋರ್ಟ್‌ನ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರು ಇಂದು ಮಹತ್ವದ ತೀರ್ಪು ಪ್ರಕಟಿಸಿದ್ದಾರೆ. ಇದೇ ವೇಳೆ ಯೋಗೇಶ್ ಗೌಡ ಮಕ್ಕಳಿಗೆ ಪರಿಹಾರವಾಗಿ ೧೬ ಲಕ್ಷ ರೂಪಾಯಿ ನೀಡುವಂತೆ ನ್ಯಾಯಾಲಯ ಸೂಚಿಸಿದೆ.

<><*<><>*><>

ಕೊಪ್ಪಳ ಜಿಲ್ಲೆಯಲ್ಲಿ ವಿಪರೀತ ಬಿಸಿಲು, ತಾಪಮಾನ ಹೆಚ್ಚಾಗುತ್ತಿರುವ ಕಾರಣ ಅಂಜನಾದ್ರಿ ಬೆಟ್ಟ ಹತ್ತಲು ಜಿಲ್ಲಾಡಳಿತ ಸಮಯ ನಿಗದಿಪಡಿಸಿದೆ. ಬೆಳಗ್ಗೆ ೧೧ ರಿಂದ ಸಂಜೆ ೪ ಗಂಟೆವರೆಗೆ ಬೆಟ್ಟ ಹತ್ತದಂತೆ ನಿರ್ಬಂಧ ವಿಧಿಸಲಾಗಿದೆ. ಜಿಲ್ಲಾಧಿಕಾರಿ ಡಾ.ಸುರೇಶ್ ಬಿ ಹಿಟ್ನಾಳ್, ಈ ಬಗ್ಗೆ ಮಾಹಿತಿ ನೀಡಿದ್ದಾರೆ.

<><*<><>*><>

ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಘನತ್ಯಾಜ್ಯ ಸಮಸ್ಯೆ ಕುರಿತಂತೆ ಆಯುಕ್ತ ಕೆ.ಎನ್.ರಮೇಶ್ ಹಿರಿಯ ಅಧಿಕಾರಿಗಳೊಂದಿಗೆ ಇಂದು ಮಹತ್ವದ ಸಭೆ ನಡೆಸಿ, ತೃಪ್ತಿಕರವಾಗಿ ಕಾರ್ಯನಿರ್ವಹಿಸದ ಗುತ್ತಿಗೆದಾರರಿಗೆ ನೋಟಿಸ್ ನೀಡಿ ವಜಾಗೊಳಿಸಲು ಸೂಚಿಸಿದರು. ಮತ್ತು ರಸ್ತೆಗಳಲ್ಲಿ ಕಸ ಎಸೆಯುವವರಿಗೆ ಭಾರಿ ಪ್ರಮಾಣದಲ್ಲಿ ದಂಡ ವಿಧಿಸಲು ನಿರ್ದೇಶನ ನೀಡಿದರು. ಏಕಬಳಕೆಯ

ಪ್ಲಾಸ್ಟಿಕ್ ಮೇಲಿನ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಸಂಬಂಧ ಅಂಗಡಿ ಮುಂಗಟ್ಟುಗಳ ಮೇಲೆ ನಿಯಮಿತವಾಗಿ ಕಾರ್ಯಾಚರಣೆ ನಡೆಸಲು ಸೂಚಿಸಿದರು. ಸಾರ್ವಜನಿಕರಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತು ಅರಿವು ಮೂಡಿಸುವಂತೆ ಅಧಿಕಾರಗಳಿಗೆ ಸೂಚಿಸಿದರು.

**<><*<><>*><>**

ಇನ್ನು ಹವಾವರ್ತಮಾನ, ರಾಜ್ಯದ ಕರಾವಳಿಯ ಕೆಲವು ಸ್ಥಳಗಳಲ್ಲಿ ಹಾಗೂ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ. ಕೊಪ್ಪ ೨, ಗಂಗಾವತಿ, ಕಳಸ, ಜಯಪುರ, ಕಡೂರು, ಬೇಲೂರುಗಳಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ. ದಿನದ ಗರಿಷ್ಠ ತಾಪಮಾನ ೪೩.೨ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ. ಮುಂದಿನ ೫ ದಿನಗಳವರೆಗೆ ಕರಾವಳಿಯಲ್ಲಿ ಬಿಸಿ ಮತ್ತು ತೇವಾಂಶದ ವಾತಾವರಣವಿರಲಿದೆ. ಬೆಂಗಳೂರು ಹಾಗೂ ಸುತ್ತಮುತ್ತ ಗರಿಷ್ಠ ತಾಪಮಾನ ಮುಂದಿನ ೪೮ ಗಂಟೆಗಳ ವರೆಗೆ ೨ ರಿಂದ ೩ರಷ್ಟು ಹೆಚ್ಚಾಗುವ ಸಾಧ್ಯತೆಯಿದೆ.

**<><*<><>*><>**

ಕೇಂದ್ರ ಸರ್ಕಾರದ ರಾಷ್ಟ್ರೀಯ ತೋಟಗಾರಿಕೆ ಮಂಡಳಿಯು ರಾಜ್ಯದಲ್ಲಿ ಕ್ಲಸ್ಟರ್ ಡೆವಲಪ್ ಮೆಂಟ್ ಪ್ರೋಗ್ರಾಂ-ಸಿ.ಡಿ.ಪಿ ಹೊಸ ಯೋಜನೆಯನ್ನು ಅನುಷ್ಠಾನ ಮಾಡಲಿದ್ದು, ಈ ಕುರಿತಂತೆ ಆಸಕ್ತ ರೈತರಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಒಂದು ಪ್ರದೇಶದಲ್ಲಿ ಸಾಮಾನ್ಯವಾಗಿ ಬೆಳೆಯಬಹುದಾದ ಬೆಳೆಯನ್ನು ಕ್ಲಸ್ಟರ್ ರೂಪದಲ್ಲಿ ಒಗ್ಗೂಡಿಸಿ ಉತ್ಪಾದನೆ-ಸಂಸ್ಕರಣೆ- ಸಂಗ್ರಹಣೆ-ಮಾರುಕಟ್ಟೆ-ರಫ್ತು ಸರಪಳಿಯನ್ನು ಬಲಪಡಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದ್ದು, ಈ ಕ್ಲಸ್ಟರ್ ಗಳಿಗೆ ಹಣಕಾಸು ನೆರವು ನೀಡಲಾಗುವುದು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**